ಸದನದಲ್ಲಿ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ: 14ನೇ ಡಿಸೆಂಬರ್, 2020

ರಾಜ್ಯದಲ್ಲಿ ಜಿಲ್ಲಾ ಮಟ್ಟ ಮತ್ತು ತಾಲ್ಲೂಕು ಮಟ್ಟದ ಆಸ್ಪತ್ರೆಯಲ್ಲಿರುವ ಡಯಾಲಿಸಿಸ್ ಯಂತ್ರದ ಕುರಿತು

ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)-

86(607) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮತ್ತು ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಆಸ್ಪತ್ರೆಗಳಲ್ಲಿ ಉಚಿತವಾಗಿ ಡಯಾಲಿಸೀಸ್ ಮಾಡುವ ಯಂತ್ರಗಳು ಲಭ್ಯವಿದೆಯೇ;

(ಆ) ಬಡವರಿಗೆ ಖಾಸಗಿ ಆಸ್ಪತ್ರೆಯಲ್ಲಿ ಡಯಾಲಿಸೀಸ್ ಮಾಡಲು ದುಪ್ಪಟ್ಟು ದರ ನಿಗಧಿಯಿಂದ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಶಿವಮೊಗ್ಗ ಮತ್ತು ದಾವಣಗೆರೆ ಜಿಲ್ಲೆಯ ಹೊನ್ನಾಳಿ ಮತ್ತು ಚನ್ನಗಿರಿ ತಾಲ್ಲೂಕುಗಳ ಆಸ್ಪತ್ರೆಗಳಲ್ಲಿ ಅಂಬ್ಯುಲೆನ್ಸ್ ವ್ಯವಸ್ಥೆ ಇದೆಯೇ;

(ಈ) ಶಿವಮೊಗ್ಗ ಮತ್ತು ದಾವಣಗೆರೆ ಜಿಲ್ಲೆಯ ಹೊನ್ನಾಳಿ ಮತ್ತು ಚನ್ನಗಿರಿ ತಾಲ್ಲೂಕಿನ ಎಲ್ಲಾ ಆಸ್ಪತ್ರೆಗಳಲ್ಲಿ ಮಂಜೂರಾದ ವೈದ್ಯರು, ನರ್ಸ್‌ಗಳು ಹಾಗೂ ಇತರೆ ಸಿಬ್ಬಂದಿಗಳ ಸಂಖ್ಯೆ ಎಷ್ಟು; ಇವುಗಳಲ್ಲಿ ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು? (ತಾಲ್ಲೂಕುವಾರು ಮಾಹಿತಿ ನೀಡುವುದು)